## ಇದು ರಾಜಕೀಯ ಹುನ್ನಾರ ಎಂದ ಕೆಪಿಸಿಸಿ ಅಧ್ಯಕ್ಷ

# ಡಿಕೆಶಿ ಪದಗ್ರಹಣ ಮತ್ತೆ ಮುಂದಕ್ಕೆ

■ **ವಿಕ ಸುದ್ದಿಲೋಕ** ಬೆಂಗಳೂರು

ಕೆಪಿಸಿಸಿ ಅಧ್ಯಕ್ಷರಾಗಿ ಡಿ.ಕೆ.ಶಿವಕುಮಾರ್ ಅಧಿಕಾರ ಸ್ವೀಕಾರಕ್ಕೆ ಜೂ.7ರಂದು ನಿಗದಿಯಾಗಿದ್ದ ಮುಹೂರ್ತ ಮತ್ತೊಮ್ಮೆ ಮುಂದೂಡಿಕೆಯಾಗಿದೆ.

ಈ ಮೊದಲು ಮೇ 31ರಂದು ಭಾನುವಾರ ಪದಗ್ರಹಣಕ್ಕೆ ದಿನಾಂಕ ನಿಗದಿಯಾಗಿತ್ತು. ಆದರೆ, ಭಾನುವಾರ ಸಂಪೂರ್ಣ ಲಾಕ್‌ಡೌನ್ ಜಾರಿಮಾಡುವ ಸರಕಾರದ ತೀರ್ಮಾನದ ಹಿನ್ನೆಲೆಯಲ್ಲಿ ಕಾರ್ಯಕ್ರಮವನ್ನು ಜೂ.7 ಕ್ಕೆ ನಿಗದಿ ಮಾಡಲಾಗಿತ್ತು.

ಆದರೆ, ಕೇಂದ್ರ ಮತ್ತು ರಾಜ್ಯ ಸರಕಾರದ ಹೊಸ ಮಾರ್ಗಸೂಚಿಯಂತೆ ಜೂ.8ರವರೆಗೆ ಯಾವುದೇ ರಾಜಕೀಯ ಸಭೆ, ಸಮಾರಂಭ ನಡೆಸುವಂತಿಲ್ಲ. ಹೀಗಾಗಿ, ಡಿಕೆಶಿ ಪದಗ್ರಹಣ 2ನೇ ಬಾರಿ ಮುಂದೂಡಿಕೆಯಾಗಿದೆ.

**ಡಿಕೆಶಿ ಅಸಮಾಧಾನ:** ತಮ್ಮ ಪದಗ್ರಹಣಕ್ಕೆ ಸರಕಾರ ಮಾರ್ಗಸೂಚಿ ನೆಪದಲ್ಲಿ ಅಡ್ಡಿ ಮಾಡುತ್ತಿದೆ ಎಂದು ಡಿಕೆಶಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸರಕಾರ ಅನುಮತಿ ನೀಡಿದ ನಂತರವೇ ಪದಗ್ರಹಣ 'ಪ್ರತಿಜ್ಞಾ' ಕಾರ್ಯಕ್ರಮ ನಡೆಯುತ್ತದೆ ಎಂದು ಹೇಳಿದರು.

ಪಕ್ಷದ ವರಿಷ್ಠರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಜವಾಬ್ದಾರಿ ನೀಡಿದ ಘಳಿಗೆಯಿಂದಲೇ ನಾನು ಕೆಲಸ ಆರಂಭಿಸಿದ್ದೇನೆ. ಕೊರೊನಾ ಸಂಕಷ್ಟ ಸಮಯದಲ್ಲಿ ಎಲ್ಲ ಹಿರಿಯ ನಾಯಕರ ಸಹಕಾರದೊಂದಿಗೆ ಪಕ್ಷದ ಕಾರ್ಯಕರ್ತರಿಗೆ ಅಗತ್ಯ ಮಾರ್ಗದರ್ಶನ ನೀಡಿ ಕೆಲಸ ಮುಂದುವರೆಸಿದ್ದೇನೆ. ಸರಕಾರಕ್ಕೆ ಸಂಪೂರ್ಣ ಸಹಕಾರ ನೀಡುತ್ತಿದ್ದೇವೆ. ಸರಕಾರ ವಿಫಲವಾದಾಗ ಪ್ರತಿಪಕ್ಷವಾಗಿ ಎಲ್ಲ ವರ್ಗದ ಜನರ ಧ್ವನಿಯಾಗಿ ಕೆಲಸ ಮಾಡುತ್ತಿದ್ದೇವೆ ಎಂದು ಹೇಳಿದರು.

ಪಕ್ಷದ ಅಧ್ಯಕ್ಷರಾಗಿ ನೇಮಕಗೊಂಡ ನಂತರ ಸಾಂಕೇತಿಕವಾಗಿ ಕಾರ್ಯಕ್ರಮ ಮಾಡುವುದು ಪದ್ಧತಿ. ಪಕ್ಷದ ಎಲ್ಲ ನಾಯಕರ ಜತೆ ಸೇರಿ ಸರಳ ಹಾಗೂ ವಿನೂತನ ಕಾರ್ಯಕ್ರಮ ಮಾಡಲು ತೀರ್ಮಾನಿಸಿದ್ದೇವೆ. ಬೆಂಗಳೂರಿನಲ್ಲಿ ಸಾಂಕೇತಿಕವಾಗಿ 150 ಮಂದಿ ಸೇರಿ ಕಾರ್ಯಕ್ರಮ ಮಾಡುತ್ತೇವೆ. ಉಳಿದಂತೆ ಎಲ್ಲ ಪಂಚಾಯಿತಿ ಹಾಗೂ ವಾರ್ಡ್‌ಗಳಲ್ಲಿ ಸೇರಿ ಸುಮಾರು 7800 ಕಡೆಗಳಲ್ಲಿ ಏಕಕಾಲದಲ್ಲಿ 'ವಂದೇ ಮಾತರಂ' ದೇಶಭಕ್ತಿ ಗೀತೆ ಹಾಡಿ, ಸಂವಿಧಾನದ ಪೀಠಿಕೆ ವಾಚನದೊಂದಿಗೆ ಪ್ರತಿಜ್ಞೆ ಸ್ವೀಕಾರ ಮಾಡಲಾಗುವುದು ಎಂದು ತಿಳಿಸಿದರು.



**ಇದೇ ತಿಂಗಳು 7ರಂದು ಕಾರ್ಯಕ್ರಮ ಮಾಡಲು ಮುಖ್ಯಮಂತ್ರಿಗಳು, ಪೊಲೀಸ್ ಆಯುಕ್ತರಿಗೆ ಅನುಮತಿ ಕೇಳಿ, ಮನವಿ ಮಾಡಲಾಗಿತ್ತು. ಆದರೆ ಈಗ ಹೊಸ ಮಾರ್ಗಸೂಚಿ ಹೊರಬಿದ್ದಿದೆ. ಅದರಲ್ಲಿ ಸಭೆ ನಡೆಸುವುದನ್ನು ನಿರ್ಬಂಧಿಸಲಾಗಿದೆ. ಇದರ ಹಿಂದೆ ರಾಜಕೀಯ ಹುನ್ನಾರವಿದೆ.**

-**ಡಿ.ಕೆ ಶಿವಕುಮಾರ್** ಕೆಪಿಸಿಸಿ ಅಧ್ಯಕ್ಷ

## ಸ್ಪೀಕರ್ ವಿರುದ್ಧ ಗರಂ

**ಸಾರ್ವಜನಿಕ ಹಕ್ಕುಪತ್ರ ಸಮಿತಿ ಕಾರ್ಯಕ್ಕೆ ಅಡ್ಡಿಪಡಿಸಿದ ವಿಧಾನಸಭೆ ಸ್ಪೀಕರ್ ಅವರ ವಿರುದ್ಧ ಹಕ್ಕುಚ್ಯುತಿ ನಿರ್ಣಯ ಮಂಡನೆ ಬಗ್ಗೆ ಶಾಸಕಾಂಗ ಪಕ್ಷದ ಸಭೆಯಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳುತ್ತೇವೆ. ಯಾವುದೇ ಅವ್ಯವಹಾರ ಆರೋಪ ಬಂದರೆ ಸಾರ್ವಜನಿಕ ಲೆಕ್ಕಪತ್ರ ಸಮಿತಿಗೆ ಪರಿಶೀಲನೆ ನಡೆಸುವ ಹಕ್ಕಿದೆ. ಈ ವಿಚಾರದಲ್ಲಿ ಸ್ಪೀಕರ್ ಅವರು ಏಕೆ ಹಸ್ತಕ್ಷೇಪ ಮಾಡಿ ಅಡ್ಡಿ ಮಾಡುತ್ತಿದ್ದಾರೆ ಎಂಬುದು ತಿಳಿಯುತ್ತಿಲ್ಲ ಎಂದು ಅತೃಪ್ತಿ ವ್ಯಕ್ತಪಡಿಸಿದರು. ಆರ್‌ಟಿಐ ಮೂಲಕ ಎಲ್ಲ ಮಾಹಿತಿ ಸಿಗುವಾಗ ಸ್ಪೀಕರ್ ಅವರು ಸಮಿತಿ ಕಾರ್ಯಕ್ಕೆ ಪರಿಶೀಲನೆಗೆ ಅಡ್ಡಿಪಡಿಸಿದ್ದೇಕೆ? ಪರಿಶೀಲನೆ ಮಾಡುವುದರಲ್ಲಿ ತಪ್ಪೇನಿದೆ? ಸಮಿತಿಯ ಕಾನೂನುಬದ್ಧ ಕಾರ್ಯನಿರ್ವಹಣೆಗೆ ತಡೆಯಾಜ್ಞೆ ನೀಡಿರುವ ಸ್ಪೀಕರ್ ತೀರ್ಮಾನದ ಉದ್ದೇಶ ಏನು ಎಂದು ಶಿವಕುಮಾರ್ ಪ್ರಶ್ನಿಸಿದರು.**